# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ವಾರ್ಡ್ ಸಂಖ್ಯೆ 10/ಸಭೆ/ಪಿಆರ್/07/2020-21 ದಿನಾಂಕ: 4/01/2021

ಮಾನ್ಯ ಆಯುಕ್ತರು ರವರ ಸುತ್ತೋಲೆ ಸಂಖ್ಯೆ ಬಿ12(5)/ಪಿ.ಆರ್/35/2020-21 ದಿನಾಂಕ 21/09/2020ರ ಆದೇಶದ ಅನ್ವಯ ವಾರ್ಡ್ ನಂ.10 ದೊಡ್ಡಬೊಮ್ಮಸಂದ್ರ ವಾರ್ಡ್ ಕಛೇರಿಯಲ್ಲಿ ದಿನಾಂಕ: 04/01/2021 ರಂದು ನೋಡೆಲ್ ಅಧಿಕಾರಿ ರವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು

**ವಾರ್ಡ್ ಸಮಿತಿ ಸದಸ್ಯರು**

1. ಶ್ರೀ ಅಮರ್ ಸಿಂಗ್, ವಸತಿ ಕ್ಷೇಮಾಭಿವೃದ್ಧಿ ಸಂಘದ ಸದಸ್ಯರು
2. ಶ್ರೀ ವಿಜಯ್ ಬೆನಗಿ, ವಸತಿ ಕ್ಷೇಮಾಭಿವೃದ್ಧಿ ಸಂಘದ ಸದಸ್ಯರು
3. ಶ್ರೀ ಸುಜಿತ್ ಸೋನಿಲ್, ವಸತಿ ಕ್ಷೇಮಾಭಿವೃದ್ಧಿ ಸಂಘದ ಸದಸ್ಯರು
4. ಶ್ರೀ ಪ್ರಕಾಶ್ ಕೆ, ಸದಸ್ಯರು
5. ಶ್ರೀ ದಯಾಳ್, ಸದಸ್ಯರು
6. ಶ್ರೀ ಶ್ರೀನಿವಾಸ್, ಸದಸ್ಯರು
7. ಶ್ರೀ ಆರ್.ಎಂ. ಶ್ರೀನಿವಾಸ್, ಸದಸ್ಯರು
8. ಶ್ರೀ ಗೋಪಾಲ್‌ಕೃಷ್ಣ, ಸದಸ್ಯರು
9. ಶ್ರೀ ಮಲ್ಯಾದಿ, ಸದಸ್ಯರು

**ಹಾಜರಿದ್ದ ಅಧಿಕಾರಿ/ಸದಸ್ಯರು**

1. ಶ್ರೀ ಜಿ.ಶ್ರೀನಿವಾಸಮೂರ್ತಿ, ನೋಡಲ್ ಅಧಿಕಾರಿ ಹಾಗೂ ಸ.ಕಾ.ಅ, ಕೊಡಿಗೇಹಳ್ಳಿ ಉಪವಿಭಾಗ
2. ಶ್ರೀಮತಿ ಶ್ವೇತಾ ಎನ್.ಆರ್, ಸಹಾಯಕ ಅಭಿಯಂತರರು & ಕಾರ್ಯದರ್ಶಿ ಹಾಗೂ ಸಂಚಾಲಕರು
3. ಶ್ರೀಮತಿ ಡಾ ॥ ಶೋಭ ನಾಗೇಶ್, ಆರೋಗ್ಯ ವೈದ್ಯಾಧಿಕಾರಿ
4. ಸಹಾಯಕ ಕಾರ್ಯಪಾಲಕ ಅಭಿಯಂತರರು, ರಸ್ತೆ ಮತ್ತು ಮೂಲಭೂತ ಸೌಕರ್ಯ ವಿಭಾಗ, ಯಲಹಂಕ ವಲಯ, ಬೆಂಗಳೂರು
5. ಶ್ರೀ ಸತ್ಯನಾರಾಯಣ, ಕಂದಾಯ ವಸೂಲಿಗಾರರು
6. ಶ್ರೀ ಪ್ರಭಾಕರ್, ಹಿರಿಯ ಆರೋಗ್ಯ ಪರಿವೀಕ್ಷಕರು
7. ಶ್ರೀ ಮಹೇಶ್ ಕುಮಾರ್ ಎಲ್, ಕಿರಿಯ ಆರೋಗ್ಯ ಪರಿವೀಕ್ಷಕರು
8. ಶ್ರೀ ಪ್ರಕಾಶ್ ಕೆ, ಸದಸ್ಯರು
9. ಶ್ರೀ ಶ್ರೀನಿವಾಸ್, ಸದಸ್ಯರು
10. ಶ್ರೀ ಆರ್ ಎಂ ಶ್ರೀನಿವಾಸ್, ಸದಸ್ಯರು
11. ಶ್ರೀ ಗೋಪಾಲ್‌ಕೃಷ್ಣ, ಸದಸ್ಯರು
12. ಶ್ರೀ. ಶ್ರೀಮತಿ. ಬೇಬಿ ರಾಣಿ

**<u>ಗೈರು ಹಾಜರಾಗಿರುವ ಅಧಿಕಾರಿಗಳು</u>**

1. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ, ವಿದ್ಯಾರಣ್ಯಪುರ, ಬೆಂಗಳೂರು
2. ಉಪ ವಲಯ ಅರಣ್ಯ ಸಂರಕ್ಷಣಾಧಿಕಾರಿಗಳು, ಯಲಹಂಕ ವಲಯ, ಬೆಂಗಳೂರು
3. ಠಾಣಾಧಿಕಾರಿಗಳು, ವಿದ್ಯಾರಣ್ಯಪುರ ಪೊಲೀಸ್ ಠಾಣೆ (ಲಾ ಅಂಡ್ ಆರ್ಡರ್)
4. ಠಾಣಾಧಿಕಾರಿಗಳು, ವಿದ್ಯಾರಣ್ಯಪುರ ಪೊಲೀಸ್ ಠಾಣೆ (ಸಂಚಾರ)
5. ಸಹಾಯಕ ಕಾರ್ಯಪಾಲಕ ಅಭಿಯಂತರರು (ವಿದ್ಯುತ್), ಯಲಹಂಕ ವಲಯ, ಬಿ.ಬಿ.ಎಂ.ಪಿ

**ಶ್ರೀ ಜಿ. ಶ್ರೀನಿವಾಸಮೂರ್ತಿ, ನೋಡಲ್ ಅಧಿಕಾರಿ:-** ಸಭೆಗೆ ಹಾಜರಿದ್ದ ಅಧಿಕಾರಿ ಹಾಗೂ ಸದಸ್ಯರನ್ನು ಪರಿಚಯ ಮಾಡಿಕೊಳ್ಳುವುದರ ಮುಖಾಂತರ ಸ್ವಾಗತವನ್ನು ಕೋರಿದರು ಹಾಗೂ ವಾರ್ಡಿಗೆ ಸಂಬಂಧಿಸಿದ ವಿಷಯಗಳ ಬಗ್ಗೆ ಚರ್ಚಿಸಲು ಎಲ್ಲರನ್ನು ಕೋರಿ ಸಭೆಯಲ್ಲಿ ನಡೆಯುವ ನಡವಳಿಗಳನ್ನು ನಮೂದಿಸಲು ತಿಳಿಸಿದರು.

**ಶ್ರೀಮತಿ. ಡಾ||ಶೋಭ** ರವರು ಹಿಂದಿನ ಸಭೆಯಲ್ಲಿ ಎರಡು ಅಂಶಗಳ ಬಗ್ಗೆ ವಿವರಣೆ ನೀಡುತ್ತಾ, ಮೊದಲನೇಯದಾಗಿ ಜನವರಿಯಲ್ಲಿ ಪಲ್ಸ್ ಪೋಲಿಯೋ ಕಾರ್ಯಕ್ರಮವನ್ನು ಸರ್ಕಾರದ ವತಿಯಿಂದ ಹಮ್ಮಿಕೊಂಡಿದ್ದು ಒಟ್ಟು 17 ಬೂತ್‌ಗಳಲ್ಲಿ ಲಸಿಕೆ ಹಾಕುವ ಕಾರ್ಯಕ್ರಮವನ್ನು ನಿಗದಿ ಪಡಿಸಿದ್ದು, ಇದರ ಮಾಹಿತಿಯನ್ನು ವಾಟ್ಸ್ ಆಫ್ ಮುಖಾಂತರ ಎಲ್ಲರಿಗೂ ತಿಳಿಸುವುದಾಗಿ ಎಂದು ತಿಳಿಸಿದರು. ಮುಂದುವರೆದುಕೋವಿಡ್ ರೋಗಕ್ಕೆ ಸಂಬಂಧಿಸಿದಂತೆ ದೇಶದಲ್ಲಿ ಎರಡು ಸಂಸ್ಥೆಗಳು ಲಸಿಕೆ ತಯಾರಿಸಿದ್ದು, ಮೂರು ಹಂತದ ಪರೀಕ್ಷೆಗಳ ನಂತರ ಲಸಿಕೆಯ ಗುಣಮಟ್ಟ ಮತ್ತು ಅದರ ಪರಿಣಾಮಗಳ ಪರೀಕ್ಷೆ ನಡೆಸಿದ ನಂತರ ಸಾರ್ವಜನಿಕರಿಗೆ ಭಾರತದಿಂದ ನಿಗದಿ ಪಡಿಸುವ ದಿನಾಂಕದಂದು ಹಾಗೂ ನಿಯಮಗಳಂತೆ ಎರಡು ಡೋಸ್‌ಗಳನ್ನು 25 ದಿನಗಳ ಅಂತರದಲ್ಲಿ ನೀಡಲಾಗುತ್ತದೆ ಎಂದು ತಿಳಿಸಿದರು,ಕೋವಿಡ್ ರೋಗವನ್ನು ಸಾರ್ವಜನಿಕ ಹಾಗೂ ಅಧಿಕಾರಿಗಳ ಸಹಾಯೋಗದೊಂದಿಗೆ ಹಲವಾರು ಬಾರಿ ಪರೀಕ್ಷೆಗಳನ್ನು ನಡೆಸಿದ್ದು, ಈಗ ನಿಯಂತ್ರಣದಲ್ಲಿರುವ ಬಗೆ ತಿಳಿಸಿದರು. ಪ್ರಸ್ತುತ ಬೆಂಗಳೂರು ನಗರದಲ್ಲಿ 300 ಜನರಿಗೆ ಮಾತ್ರ ಕೋವಿಡ್ ಸೋಂಕು ಇರುವುದು 24 ಗಂಟೆಗಳ ಅವಧಿಯೊಳಗೆ ಎಂದು ತಿಳಿಸಿದರು.

**ಶ್ರೀಮತಿ. ಬೇಬಿ** ರವರು ಭೈರಪ್ಪ ಗಾರ್ಡನ್ ಬಡಾವಣೆಯಲ್ಲಿ ಒಳಚರಂಡಿ ಕೆಲಸವು ಮುಗಿದಿರುವ ಬಗ್ಗೆ ಹರುಷವನ್ನು ವ್ಯಕ್ತ ಪಡಿಸುತ್ತಾ, ಸದರಿ ರಸ್ತೆಗಳನ್ನು ಕಾಂಕ್ರೀಟ್ ರಸ್ತೆ ನಿರ್ಮಾಣ ಮಾಡಬೇಕೆಂದು ಶ್ರಂವಹಿಸಬೇಕೆಂದು ಕೋರಿದರು. ಬಡಾವಣೆಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ನಾಯಿಗಳು ಸಾರ್ವಜನಿಕರುಗಳಿಗೆ ಕಚ್ಚುವ ಹಾಗೂ ಎದರಿಸುವ ಸಂಖ್ಯೆಗಳು ಹೆಚ್ಚಾಗಿರುವುದರಿಂದ ಈ ಸಮಸ್ಯೆಯನ್ನು ಬಗೆಹರಿಸುವ ನಿಟ್ಟಿನಲ್ಲಿ ಬಿಬಿಎಂಪಿ ಕಛೇರಿಯ ಪಶು ಸಂಗೋಪನಾ ಅಧಿಕಾರಿಯವರನ್ನು ಮುಂದಿನ ಸಭೆಗೆ ಆಹ್ವಾನಿಸಬೇಕೆಂದು ಕೋರಿದರು. ಅಂಗನವಾಡಿಗಳಲ್ಲಿ ಸಮರ್ಪಕಾದ ಸೇವೆ ನೀಡುತ್ತಿಲ್ಲದಿರುವ ಬಗ್ಗೆ ಸಾರ್ವಜನಿಕರು ದೂರನ್ನು ನೀಡುತ್ತಿರುವ ಹಿನ್ನೆಲೆಯಲ್ಲಿ ಮುಂದಿನ ಸಭೆಗೆ ಈ ಕಛೇರಿಯ

ಮುಖ್ಯಸ್ಥರನ್ನು ಸಮಸ್ಯೆ ಬಗೆಹರಿಸಲು ಸಮಲೋಚನೆಗಾಗಿ ಕರೆಸಬೇಕೆಂದು ಕೋರಿದರು. ವಾರ್ಡ್ ಸಮಿತಿ ಸದಸ್ಯರು ಮುಂದಿನ ಸಭೆಯ ಸಭೆಗೆ ಜಲಮಂಡಳಿಯ ಅಧಿಕಾರಿಗಳನ್ನು ಮತ್ತು ಘನತ್ಯಾಜ್ಯ ನಿರ್ವಹಣೆಗೆ ಸಂಬಂಧಿಸಿದ ಅಧಿಕಾರಿ ಮತ್ತು ಒಣ ಹಾಗೂ ಹಸಿ ಕಸಗಳ ಸಂಗ್ರಹಣೆಯ ಗುತ್ತಿಗೆದಾರರುಗಳನ್ನು ಅವರುಗಳ ಕಾರ್ಯವೈಖರಿಗಳಲ್ಲು ತಿಳಸಲು ಸಭೆಗೆ ಕರೆಯಬೇಕೆಂದು ಸಹ ಕೋರಿದರು.

ಶ್ರೀ ಜಿ. ಶ್ರೀನಿವಾಸಮೂರ್ತಿ, ನೋಡಲ್ ಅಧಿಕಾರಿ ರವರು ಈ ಮೇಲ್ಕಂಡ ಅಂಶಗಳ ಬಗ್ಗೆ ಸಭೆಯಲ್ಲಿ ಉಪಸ್ಥಿತರಿದ್ದ ಅಧಿಕಾರಿಗಳು ಹಾಗೂ ಸದಸ್ಯರೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು, ಸದರಿ ವಿಷಯಗಳ ಬಗ್ಗೆ ಕ್ರಮಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಿ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

Swetha . N.K
ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ 10, ದೊಡ್ಡಬೊಮ್ಮಸಂದ್ರ

4/1/2021
ನೋಡೆಲ್ ಅಧಿಕಾರಿ ವಾರ್ಡ್–10 ಹಾಗೂ
ಸಹಾಯಕ ಕಾರ್ಯಪಾಲಕ ಅಭಿಯಂತರರು
ಕೊಡಿಗೇಹಳ್ಳಿ ಉಪವಿಭಾಗ

ಪ್ರತಿಯನ್ನು:

1. ಮಾನ್ಯ ಜಂಟಿ ಆಯುಕ್ತರು, ಯಲಹಂಕ ವಲಯ ರವರಿಗೆ ಅವಗಾಹನೆಗೆ ಸಲ್ಲಿಸಿದೆ.
2. ಮುಖ್ಯ ಅಭಿಯಂತರರು, ಯಲಹಂಕ ವಲಯ ರವರಿಗೆ ಅವಗಾಹನೆಗೆ ಸಲ್ಲಿಸಿದೆ.
3. ಆರೋಗ್ಯ ವೈದ್ಯಾಧಿಕಾರಿಗಳು, ಯಲಹಂಕ ವಲಯ, ಬಿಬಿಎಂಪಿ ರವರಿಗೆ ಸಲ್ಲಿಸಿದೆ.
4. ಕಾರ್ಯಪಾಲಕ ಅಭಿಯಂತರರು, ಬ್ಯಾಟರಾಯನಪುರ ವಿಭಾಗ/ಯೋಜನಾ ವಿಭಾಗ, ಬಿ.ಬಿ.ಎಂ.ಪಿ ರವರಿಗೆ ಸಲ್ಲಿಸಿದೆ.
5. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ವಿದ್ಯಾರಣ್ಯಪುರ ವಿಭಾಗ ರವರಿಗೆ ಸಲ್ಲಿಸುತ್ತಾ ವಾರ್ಡ್‌ನ ಆರೋಗ್ಯ ಪರಿವೀಕ್ಷಕರು ಹಾಗೂ ಘನತ್ಯಾಜ್ಯ ನಿರ್ವಹಣೆಯ ಗುತ್ತಿಗೆದಾರರೊಂದಿಗೆ ಸಭೆಗೆ ಹಾಜರಾಗಲು ಕೋರಿದೆ.
6. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿಡಬ್ಲ್ಯೂ.ಎಸ್.ಎಸ್.ಬಿ, ಬೆಂಗಳೂರು.
7. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೀದಿ ದೀಪಗಳ ನಿರ್ವಹಣೆ, ಯಲಹಂಕ ವಲಯ, ಬೆಂಗಳೂರು ರವರಿಗೆ ಸಲ್ಲಿಸಿದೆ.
8. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ, ವಿದ್ಯಾರಣ್ಯಪುರ, ಬೆಂಗಳೂರು ರವರಿಗೆ ಸಲ್ಲಿಸಿದೆ.
9. ಸಹಾಯಕ ಕಾರ್ಯಪಾಲಕ ಅಭಿಯಂತರರು, ರಸ್ತೆ ಮತ್ತು ಮೂಲಭೂತ ಸೌಕರ್ಯ ವಿಭಾಗ, ಯಲಹಂಕ ವಲಯ, ಬೆಂಗಳೂರು ರವರಿಗೆ ಸಲ್ಲಿಸಿದೆ.
10. ಕಾಂಟ್ಯಾಕ್ಟ್ ಟ್ರೇಸಿಂಗ್ ನೋಡೆಲ್ ಅಧಿಕಾರಿ, ಬ್ಯಾಟರಾಯನಪುರ ವಿಭಾಗ, ಬೆಂಗಳೂರು ರವರಿಗೆ ಸಲ್ಲಿಸಿದೆ.
11. ಹೋಮ್ ಕ್ವಾರಂಟೇನ್ ಸ್ಕ್ವಾಡ್ ನೋಡೆಲ್ ಅಧಿಕಾರಿ, ಬ್ಯಾಟರಾಯನಪುರ ವಿಭಾಗ, ಬೆಂಗಳೂರು ರವರಿಗೆ ಸಲ್ಲಿಸಿದೆ.
12. ಕಲ್ಯಾಣಾಧಿಕಾರಿ, ಯಲಹಂಕ ವಲಯ, ಬೆಂಗಳೂರು ರವರಿಗೆ ಸಲ್ಲಿಸಿದೆ.
13. ಉಪ ವಲಯ ಅರಣ್ಯ ಸಂರಕ್ಷಣಾಧಿಕಾರಿಗಳು, ಯಲಹಂಕ ವಲಯ, ಬೆಂಗಳೂರು ರವರಿಗೆ ಸಲ್ಲಿಸಿದೆ.
14. ಠಾಣಾಧಿಕಾರಿಗಳು, ವಿದ್ಯಾರಣ್ಯಪುರ ಪೋಲೀಸ್ ಠಾಣೆ (ಲಾ ಅಂಡ್ ಆರ್ಡರ್) ರವರಿಗೆ ಸಲ್ಲಿಸಿ ಸಭೆಗೆ ತಪ್ಪದೇ ಹಾಜರಿರಲು ಕೋರಿದೆ.
15. ಠಾಣಾಧಿಕಾರಿಗಳು, ವಿದ್ಯಾರಣ್ಯಪುರ ಪೋಲೀಸ್ ಠಾಣೆ (ಸಂಚಾರ) ರವರಿಗೆ ಸಲ್ಲಿಸಿ ಸಭೆಗೆ ತಪ್ಪದೇ ಹಾಜರಿರಲು ಕೋರಿದೆ.
16. ಕಛೇರಿ ಕಡತಕ್ಕೆ.